ಶ್ರೀ ಎಂ.ಸಿ. ನಾಣಯ್ಯ : ಬಹಳ ಗಂಭೀರವಾಗಿರತಕ್ಕಂಥ ಪ್ರಶ್ನೆ ಇದು, ಬೆಂಗಳೂರು ನಗರಕ್ಕೆ ಸಂಬಂಧಪಟ್ಟ ಹಾಗೆ ನಮ್ಮ ಬೆಂಗಳೂರು ನಗರದ ಜನಸಂಖ್ಯೆ 65 ಲಕ್ಷ. ಬೆಂಗಳೂರು ನಗರದಲ್ಲಿ ಸುಮಾರು 20 ಲಕ್ಷ ದ್ವಿಚಕ್ರ ಮತ್ತು ನಾಲ್ಕು ಚಕ್ರದ ವಾಹನಗಳು ಓಡಾಡುತ್ತಿವೆ ಎಲ್ಲ ಸೇರಿ 2 ಲಕ್ಷ ದ್ವಿಚಕ್ರ ವಾಹನಗಳು ಇವೆ. 8-9 ಲಕ್ಷ ನಾಲ್ಕು ಚಕ್ರದ ವಾಹನಗಳು ಒಟ್ಟು ಸೇರಿ 20 ಲಕ್ಷ ವಾಹನಗಳು. ಈ ಪರಿಸ್ಥಿತಿಯ ಬಗ್ಗೆ ನಾವು ಚರ್ಚೆ ಮಾಡಬೇಕಾಗಿದೆ ಬಹುಶ: ಇದನ್ನು ನಾವು ನಿಯಮ 69ರ ಅಡಿಯಲ್ಲಿ ತೆಗೆದುಕೊಂಡು ಸಮಗ್ರವಾಗಿ ಚರ್ಚೆ ಮಾಡುವ.

ಆ) ಚುಕ್ಕೆ ಗುರ್ತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಎಂ.ಸಿ. ನಾಣಯ್ಯ (ಮಾನ್ಯ ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಅಧ್ಯಕ್ಷರೆ, ಲಿಖಿತ ಮೂಲಕ ಉತ್ತರಿಸುವ ಎಂಟನೇ ಪ್ರಶ್ನೆಗಳ ಪಟ್ಟಿಯಲ್ಲಿನ 110 ಪ್ರಶ್ನೆಗಳ ಪೈಕಿ 80 ಪ್ರಶ್ನೆಗಳ ಉತ್ತರವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಹುಬ್ಬಳ್ಳಿ ನಗರದ ಸಾರ್ವಜನಿಕ ಶಿಕ್ಷಣ ಇಲಾಖೆಗೆ ಉಪ ನಿರ್ದೇಶಕರ ಹುದ್ದೆ ಮಂಜೂರು ಮಾಡುವುದು

380 (652) ಶ್ರೀ ಅಶೋಕ ಕಾಟ್ವೆ (ಹುಬ್ಬಳ್ಳಿ ನಗರ): ಮಾನ್ಯ ಪ್ರಾಥಮಿಕ, ಪ್ರೌಢ ಮತ್ತು ಉನ್ನತ ಶಿಕ್ಷಣ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಹುಬ್ಬಳ್ಳಿ ನಗರದಲ್ಲಿರುವ ಪ್ರಾಥಮಿಕ, ಪ್ರೌಢ ಹಾಗೂ ಪದವಿಪೂರ್ವ ಶಾಲಾ ಕಾಲೇಜುಗಳ ಒಟ್ಟು ಸಂಖ್ಯೆ ಎಷ್ಟು; ಇದರಲ್ಲಿ ಅನುದಾನಿತ ಹಾಗೂ ಅನುದಾನರಹಿತ ಶಾಲೆಗಳು ಎಷ್ಟು; ಮಂಜೂರಾದ ಶಿಕ್ಷಕರ ಸಂಖ್ಯೆ ಎಷ್ಟು; ಎಷ್ಟು ಶಿಕ್ಷಕರ ಹುದ್ದೆಗಳು ಖಾಲಿ ಇವೆ; ಖಾಲಿ ಇರುವ ಹುದ್ದೆಗಳನ್ನು ಯಾವಾಗ ತುಂಬಲಾಗುವುದು;

2) ಈ ನಗರದಲ್ಲಿರುವ ಶಾಲೆಗಳ ಸ್ವಂತ ಹಾಗೂ ಬಾಡಿಗೆ ಕಟ್ಟಡಗಳಲ್ಲಿರುವ ಶಾಲೆಗಳ ಸಂಖ್ಯೆ ಎಷ್ಟು, ಬಾಡಿಗೆ ಕಟ್ಟಡದಲ್ಲಿ ಇರುವ ಶಾಲೆಗಳಿಗೆ ಪ್ರತಿವರ್ಷ ಎಷ್ಟು ಬಾಡಿಗೆ ಸಂದಾಯವಾಗುತ್ತದೆ. (ಸಂಪೂರ್ಣ ವಿವರ ಒದಗಿಸುವುದು) ಸ್ವಂತ ಕಟ್ಟಡಗಳನ್ನು ಹೊಂದುವಂತೆ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ?

3) ಪರಿಶಿಷ್ಟ ಜಾತಿ : ಪಂಗಡ ಹಿಂದುಳಿದ ವರ್ಗದ ಶಾಲೆಗಳಿಗೆ ಅನುದಾನ ಯಾವ ರೀತಿ ಬಿಡುಗಡೆ ಮಾಡಲಾಗುತ್ತಿದೆ; ಬಿಡುಗಡೆ ಮಾಡಲು ಯಾವ ಆಧಾರ ಅನುಸರಿಸಲಾಗುತ್ತಿದೆ;

4) ಹುಬ್ಬಳ್ಳಿ-ಧಾರವಾಡ ಮಹಾನಗರಕ್ಕೆ ಬೆಂಗಳೂರಿನ ಮಾದರಿಯಂತೆ ಪ್ರತ್ಯೇಕ ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ ಹುದ್ದೆ ಮಂಜೂರು ಮಾಡುವ ವಿಚಾರ ಸರ್ಕಾರದ ಮುಂದೆ ಇದೆಯೆ (ವಿವರ ನೀಡುವುದು).

ಶ್ರೀ ಹೆಚ್. ಜಿ. ಗೋವಿಂದೇಗೌಡ (ಪ್ರಾಥಮಿಕ, ಪ್ರೌಢ ಹಾಗೂ ಉನ್ನತ ಶಿಕ್ಷಣ ಸಚಿವರು) :